## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀಮತಿ ಪಿ.ಜಿ ಕಾವೇರಿಯಮ್ಮ, ಅಂದಿನ ಯೋಜನಾ ಸಮನ್ವಯಾಧಿಕಾರಿ ಸಮಗ್ರ ಗಿರಿಜನ ಅಭಿವೃದ್ಧಿ ಯೋಜನೆ, ಚಿಕ್ಕಮಗಳೂರು ಇವರ ವಿರುದ್ಧ ಶಿಸ್ತು ಕ್ರಮ ಜರುಗಿಸುವ ಬಗ್ಗೆ.

ಓದಲಾಗಿದೆ:
1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾಪಂಚಾಯಿತಿ, ಚಿಕ್ಕಮಗಳೂರು ಇವರ ಪತ್ರದ ಸಂಖ್ಯೆ: ಜಿಪಂಚಿ:ಅ4:ಪಿಆರ್:481: 2006-07 ದಿ:10.06.2008
2. ಸರ್ಕಾರದ ಪತ್ರ ಸಂಖ್ಯೆ: ಸಕಇ 6 ಪವಯೋ 2010, ದಿನಾಂಕ: 11.02.2011
3. ಶ್ರೀಮತಿ ಪಿ.ಜಿ. ಕಾವೇರಿಯಮ್ಮ, ಅಂದಿನ ಯೋಜನಾ ಸಮನ್ವಯಾಧಿಕಾರಿ ಇವರ ಲಿಖಿತ ಸಮಜಾಯಿಷಿ ದಿನಾಂಕ;07.09.2011
4. ಸರ್ಕಾರದ ಆದೇಶ ಸಂಖ್ಯೆ: ಸಕಇ 66 ಪವಯೋ 2010 ದಿನಾಂಕ: 05.12.2011
5. ಶ್ರೀ ವಸಂತ್.ಹೆಚ್ ಮುಳಸಾವಲಗಿ, ವಿಚಾರಣಾಧಿಕಾರಿಗಳು ಇವರ ಪತ್ರ ದಿನಾಂಕ: 06.08.2012

ಪ್ರಸ್ತಾವನೆ:-

ಶ್ರೀಮತಿ ಪಿ.ಜಿ ಕಾವೇರಿಯಮ್ಮ, ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ (ನಿವೃತ್ತ), ಸಮಾಜ ಕಲ್ಯಾಣ ಇಲಾಖೆ, ಇವರು ಈ ಹಿಂದೆ ಯೋಜನಾ ಸಮನ್ವಯಾಧಿಕಾರಿ, ಸಮಗ್ರ ಗಿರಿಜನ ಅಭಿವೃದ್ಧಿ ಯೋಜನೆ, ಚಿಕ್ಕಮಗಳೂರು ಈ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅವಧಿಯಲ್ಲಿ ಕೆಲವು ಅವ್ಯವಹಾರಗಳನ್ನು ಎಸಗಿರುವುದಾಗಿ ತಿಳಿಸಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು ಇವರು ಮೇಲೆ ಓದಲಾದ ಕ್ರಮ ಸಂಖ್ಯೆ: (1)ರ ಪತ್ರದಲ್ಲಿ ಸರ್ಕಾರಕ್ಕೆ ವರದಿ ಸಲ್ಲಿಸಿದ್ದರು. ಇವರ ವರದಿಯ ಆಧಾರದ ಮೇಲೆ ಆರೋಪಗಳನ್ನು ಒಳಗೊಂಡ ದೋಷಾರೋಪಣ ಪಟ್ಟಿ ತಯಾರಿಸಿ ದಿನಾಂಕ: 11.02.2011ರಲ್ಲಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರಡಿ ಕಾರಣ ಕೇಳುವ ನೋಟಿಸನ್ನು ಮೇಲೆ (2)ರಲ್ಲಿ ಓದಲಾದ ಪತ್ರದಲ್ಲಿ ಜಾರಿಗೊಳಿಸಲಾಗಿತ್ತು.

ಶ್ರೀಮತಿ ಪಿ.ಜಿ ಕಾವೇರಿಯಮ್ಮ ಇವರು ಮೇಲೆ (3)ರಲ್ಲಿ ಓದಲಾದ ಮನವಿಯಲ್ಲಿ ಸಮಜಾಯಿಷಿ ಸಲ್ಲಿಸುತ್ತಾ, ಅವರ ವಿರುದ್ಧದ ಆರೋಪಗಳನ್ನು ಅಲ್ಲಗಳೆದಿರುತ್ತಾರೆ. ಆದಕಾರಣ ಅವರ ವಿರುದ್ಧದ ಆರೋಪಗಳಲ್ಲಿನ ಸತ್ಯಾಸತ್ಯತೆಯನ್ನರಿಯಲು ಇಲಾಖಾ ವಿಚಾರಣೆ ನಡೆಸಲು ನಿರ್ಧರಿಸಿ, ಮೇಲೆ ಓದಲಾದ ಕ್ರಮ ಸಂಖ್ಯೆ: (4) ರಲ್ಲಿನ ಸರ್ಕಾರಿ ಆದೇಶ ದಿನಾಂಕ: 05.12.2011ರಲ್ಲಿ ಶ್ರೀಮತಿ ಪಿ.ಜಿ ಕಾವೇರಿಯಮ್ಮ, ಅಂದಿನ ಯೋಜನಾ ಸಮನ್ವಯಾಧಿಕಾರಿ, ಸಮಗ್ರ ಗಿರಿಜನ ಅಭಿವೃದ್ಧಿ ಯೋಜನೆ, ಚಿಕ್ಕಮಗಳೂರು ಇವರ ವಿರುದ್ಧದ ಆರೋಪಗಳ ಕುರಿತಂತೆ ಇಲಾಖಾ ವಿಚಾರಣೆ ನಡೆಸುವ ಸಲುವಾಗಿ ಶ್ರೀ ವಸಂತ.ಹೆಚ್ ಮುಳಸಾವಲಗಿ, ನಿವೃತ್ತ ಸಿವಿಲ್ ನ್ಯಾಯಾಧೀಶರು ಇವರನ್ನು ಇಲಾಖಾ ವಿಚಾರಾಣಾಧಿಕಾರಿಯನ್ನಾಗಿ ಹಾಗೂ ಸಹಾಯಕ ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಇವರನ್ನು ಮಂಡನಾಧಿಕಾರಿಗಳನ್ನಾಗಿ ನೇಮಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ: (4)ರಲ್ಲಿನ ಪತ್ರದಲ್ಲಿ ಶ್ರೀ ವಸಂತ ಹೆಚ್ ಮುಳಸಾವಲಗಿ, ನಿವೃತ್ತ ಸಿವಿಲ್ ನ್ಯಾಯಾಧೀಶರು ಹಾಗೂ ಇಲಾಖಾ ವಿಚಾರಣಾಧಿಕಾರಿಗಳು ಇವರು ಇಲಾಖಾ ವಿಚಾರಣೆಯನ್ನು ಕೈಗೊಂಡು ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಸದರಿ ವಿಚಾರಣಾ

ವರದಿಯಲ್ಲಿ ಆರೋಪಿತ ಅಧಿಕಾರಿಯು ಮೇಲಾಧಿಕಾರಿಗಳ ಸೂಚನೆಗಳನ್ನು ಪಾಲಿಸದಿರುವ ಬಗ್ಗೆ ಹಾಗೂ ನಿರ್ಲಕ್ಷಿಸಿರುವ ಬಗ್ಗೆ ಯಾವುದೇ ಸಾಕ್ಷ್ಯಾಧಾರಗಳು ಲಭ್ಯವಿಲ್ಲದೇ ಇರುವುದರಿಂದ ಆರೋಪಗಳು ಸಾಬೀತಾಗಿಲ್ಲವೆಂದು ಅಭಿಪ್ರಾಯಪಟ್ಟಿರುತ್ತಾರೆ.

ವಿಚಾರಣಾ ವರದಿಯನ್ನು ಸರ್ಕಾರವು ಪರಿಶೀಲಿಸಿ ವಿಚಾರಣಾಧಿಕಾರಿಗಳ ವರದಿಯನ್ನು ಒಪ್ಪಿ ಆರೋಪಿತರನ್ನು ದೋಷಮುಕ್ತರನ್ನಾಗಿಸಲು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಸಕಇ 06 ಪವಯೋ 2010, ಬೆಂಗಳೂರು ದಿನಾಂಕ:06.02.2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಮತಿ ಪಿ.ಜಿ ಕಾವೇರಿಯಮ್ಮ, ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ (ನಿವೃತ್ತ), ಸಮಾಜ ಕಲ್ಯಾಣ ಇಲಾಖೆ, ಇವರು ಯೋಜನಾ ಸಮನ್ವಯಾಧಿಕಾರಿ, ಸಮಗ್ರ ಗಿರಿಜನ ಅಭಿವೃದ್ಧಿ ಯೋಜನೆ, ಚಿಕ್ಕಮಗಳೂರು ಈ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅವಧಿಯಲ್ಲಿ ಪರಿಶಿಷ್ಟ ವರ್ಗದ ಬಾಲಕ, ಬಾಲಕಿಯರನ್ನು ನರ್ಸಿಂಗ್ ತರಬೇತಿಗೆ ಆಯ್ಕೆ ಮಾಡುವ ಬಗ್ಗೆ ದುರ್ನಡತೆ/ ಕರ್ತವ್ಯ ಲೋಪ ತೋರಿರುವ ಆರೋಪಗಳಿಂದ ದೋಷಮುಕ್ತರನ್ನಾಗಿ ಮಾಡಿ ಸರ್ಕಾರ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್.ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:

1.ಮಹಾಲೇಖಪಾಲರು, (ಎ ಮತ್ತು ಇ ಲೆಕ್ಕಪರಿಶೋಧನೆ-1 ಮತ್ತು ಲೆಕ್ಕಪರಿಶೋಧನೆ-2, ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3.ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಕೃಷಿಭವನ, ಬೆಂಗಳೂರು.
4.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು.
5.ಯೋಜನಾ ಸಮನ್ವಯಾಧಿಕಾರಿ, ಸಮಗ್ರ ಗಿರಿಜನ ಅಭಿವೃದ್ಧಿ ಯೋಜನೆ, ಚಿಕ್ಕಮಗಳೂರು.
6.ಶ್ರೀ ವಸಂತ್.ಹೆಚ್. ಮುಳಸಾವಲಗಿ, ನಿವೃತ್ತ ಸಿವಿಲ್ ನ್ಯಾಯಾಧೀಶರು, ಮನೆ ನಂ.10, ನಂಜಪ್ಪ ಲೇಔಟ್, 1ನೇ ಹಂತ, 2ನೇ ತಿರುವು, ಕೋರಮಂಗಲ, 8ನೇ ಬ್ಲಾಕ್, ಬೆಂಗಳೂರು-- 95.
7.ಸಹಾಯಕ ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಕೃಷಿಭವನ, ಬೆಂಗಳೂರು.
8.ಶ್ರೀಮತಿ ಪಿ.ಜಿ ಕಾವೇರಿಯಮ್ಮ, ಸಹಾಯಕ ನಿರ್ದೇಶಕರು, (ನಿವೃತ್ತ) ಕರ್ನಾಟಕ ವಸತಿ ಶಿಕ್ಷಣ ಸಂಘ, ರೂಪ ಕಾಂಪ್ಲೆಕ್ಸ್, ಶೇಷಾದ್ರಿಪುರಂ, ಬೆಂಗಳೂರು.
9.ಶಾಖಾ ರಕ್ಷ ಕಡತ.
10.ಹೆಚ್ಚುವರಿ ಪ್ರತಿ.